ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

BENGALURU
CITY UNIVERSITY

Office of the Registrar, Central College Campus, Dr. B.R. Ambedkar Veedhi, Bengaluru – 560 001.
PhNo.080-22131385, E-mail: registrarbcu@gmail.com

No. BCU/BoS/NEP/90/2021-22 Date:19.08.2021

## CIRCULAR

Sub: Implementation of National Education Policy (NEP) 2020.
Ref: 1. Govt. Order No. ED 260 UNE 2019(part -1) Dated 07.08.2021.
2. Approval of the Vice-Chancellor dated 19.08.2021.

****

The Government of Karnataka (ref-1) has implemented the National Education Policy (NEP) 2020 from the academic year 2021-22. The NEP document and related materials are already uploaded on the University website. All the Deans of the Faculties, Chairpersons/Co-coordinators of the Post Graduate Departments and teachers are hereby informed to take necessary steps for effective implementation of the NEP 2020. A Committee under the Chairmanship of the Vice-Chancellor is constituted for preparation of Regulations, Scheme of Examination, implementation of NEP 2020. The details will be uploaded on the University website periodically.

All the Deans, Chairpersons/Coordinators and teachers of the Post Graduate Departments are requested to take necessary steps for effective implementation of the National Education Policy (NEP) 2020

***REGISTRAR***

To,

1. The Dean Faculty of Science/Commerce/Arts, and I/c Dean Education Faculty BCU.
2. The Chairpersons and coordinators of the Post Graduate Departments of BCU

Copy to;

1. The additional Chief Secretary to Govt., Higher Education Dept., M.S. Bldg, Bengaluru -560001
2. The Executive Director, Karnataka Higher Education Council, P.K. Block, Bengaluru560001
3. Deans of all the Faculties, BCU.
4. All the Chairpersons / Co-ordinators of PG Departments, BCU.
5. For hoisting on the Website.
6. PS to VC/Registrar/Registrar (Evaluation), BCU.
7. Office Copy / Guard file

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಭಾರತ ಸರ್ಕಾರವು ಪ್ರಕಟಿಸಿರುವ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ 260 ಯುಎನ್ಇ 2019, ಬೆಂಗಳೂರು ದಿನಾಂಕ: 04.03.2020.
2. ರಾಷ್ಟ್ರೀಯ ಶಿಕ್ಷಣ ನೀತಿ -2020 ಕಾರ್ಯಪಡೆ ವರದಿಯ ದಿನಾಂಕ:07.11.2020.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 260 ಯುಎನ್ಇ 2019, ಬೆಂಗಳೂರು ದಿನಾಂಕ: 17.12.2020.
4. ಸರ್ಕಾರದ ಆದೇಶ ಸಂಖ್ಯೆ: ಇಡಿ 260 ಯುಎನ್ಇ 2019, ಬೆಂಗಳೂರು, ದಿನಾಂಕ: 19.06.2021.
5. ಕಾರ್ಯದರ್ಶಿ, ಯುಜಿಸಿ ರವರ ಮಾರ್ಗಸೂಚಿ ಪತ್ರ ಸಂಖ್ಯೆ: DO No. F. I -3/ 2021 (QIP), ದಿನಾಂಕ: 29.07.202I.
6. ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಪತ್ರ ಸಂಖ್ಯೆ: ಕರಾಉಶಿಪ/ ರಾಶಿನೀ: 373/ 2021, ಬೆಂಗಳೂರು, ದಿನಾಂಕ: 04.08.2021.

****

## ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1) ದಿನಾಂಕ:04.03.2020ರ ಆದೇಶದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ 2020 (ಎನ್ಇಪಿ 2020) ರ ಧ್ಯೇಯೋದ್ದೇಶಗಳು ಮತ್ತು ಗುರಿಗಳನ್ನು ಸಾದಿಸಲು ಅನುಷ್ಠಾನ ಯೋಜನೆಯನ್ನು ಅಭಿವೃದ್ಧಿ ಪಡಿಸಲು ಶ್ರೀ ಎಸ್. ವಿ. ರಂಗನಾಥ್, ಭಾ.ಆ.ಸೇ (ನಿ) ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ಕಾರ್ಯಪಡೆಯನ್ನು ರಚಿಸಲಾಗಿತ್ತು.

ಈ ಕಾರ್ಯಪಡೆಯು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ದಿನಾಂಕ: 07.11.2020 ರಂದು ವರದಿ ಸಲ್ಲಿಸಿರುತ್ತದೆ. ಈ ಹಿನ್ನೆಲೆಯಲ್ಲಿ, ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ದಿನಾಂಕ:17.12.2020 ರಂದು ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಯೋಜನಾ ಬದ್ಧವಾಗಿ ಮತ್ತು ಸಮರ್ಪಕವಾಗಿ ಕರ್ನಾಟಕ ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಆದೇಶ ನೀಡಲಾಗಿದೆ.

ವಿಶ್ವವಿದ್ಯಾಲಯ ಧನಸಹಾಯ ಆಯೋಗವು ಓದಲಾದ ಕ್ರಮ ಸಂಖ್ಯೆ (4) ರ ದಿನಾಂಕ:29.07.2021 ರ ಪತ್ರದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಅನುಷ್ಠಾನಗೊಳಸುವಾಗ ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ನೀಡಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6) ರ ದಿನಾಂಕ: 04.08.2021 ರಲ್ಲಿ ಉನ್ನತ ಶಿಕ್ಷಣ ಪರಿಷತ್ತಿನವರ ವರದಿಯಲ್ಲಿ, ರಾಜ್ಯದ ಉನ್ನತ ಶಿಕ್ಷಣ ಇಲಾಖೆಯಡಿಯ ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳಲ್ಲಿ, 2021-22 ಶೈಕ್ಷಣಿಕ ಸಾಲಿನಿಂದ ರಾಷ್ಟ್ರೀಯ ಶಿಕ್ಷಣ ನೀತಿಯನ್ನು

ಜಾರಿಗೊಳಿಸಲು ಹಾಗೂ ಅದಕ್ಕೆ ಪೂರಕವಾದ ಪಠ್ಯಕ್ರಮ ತೆಗೆದುಕೊಳ್ಳಬೇಕೆಂದು ಕೋರಿರುತ್ತಾರೆ. ಈ ಹಿನ್ನೆಲೆಯಲ್ಲಿ, ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 260 ಯುಎನ್‌ಇ 2019 (ಭಾಗ-1), ಬೆಂಗಳೂರು, ದಿನಾಂಕ: 07.08.2021.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಭಾರತ ಸರ್ಕಾರವು ಪ್ರಕಟಿಸಿರುವ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದ ಉನ್ನತ ಶಿಕ್ಷಣ ಇಲಾಖೆಯಡಿಯ ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳಲ್ಲಿ 2021-22ನೇ ಶೈಕ್ಷಣಿಕ ವರ್ಷದಿಂದ ಈ ಕೆಳಕಂಡ ಮಾರ್ಗಸೂಚಿಗಳಿಗನುಸಾರ ಅನುಷ್ಠಾನಗೊಳಿಸಿ ಆದೇಶಿಸಿದೆ.

1. ರಾಷ್ಟ್ರೀಯ ಶಿಕ್ಷಣ ನೀತಿಯ ಅನುಷ್ಠಾನದ ಮಾರ್ಗಸೂಚಿಗಳು - ಅನುಬಂಧ-1
2. ಪ್ರೋಗ್ರಾಮ್ ವಿನ್ಯಾಸ (Curriculum Structure) - ಅನುಬಂಧ-2

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಶೀತಲ್ ಎಂ. ಹಿರೇಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ
(ವಿಶ್ವವಿದ್ಯಾಲಯ-1)
ಉನ್ನತ ಶಿಕ್ಷಣ ಇಲಾಖೆ

ರವರಿಗೆ,

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಛೇರಿ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಸುಆಇ (ಇ-ಆಡಳಿತ ಇಲಾಖೆ), ಬೆಂಗಳೂರು.
5. ಕಾರ್ಯದರ್ಶಿಗಳು, ಘನವೆತ್ತ ರಾಜ್ಯಪಾಲರ ಕಛೇರಿ, ರಾಜಭವನ, ಬೆಂಗಳೂರು.

6. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು-1.
7. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯಡಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
8. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
9. ಸರ್ಕಾರದ ಜಂಟಿ ಕಾರ್ಯದರ್ಶಿಗಳು (ವಿಶ್ವವಿದ್ಯಾಲಯ), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿಗಳು (ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿಗಳು ಮತ್ತು ಆಂತರಿಕ ಆರ್ಥಿಕ ಸಲಹೆಗಾರರು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
12. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
13. ಕುಲಸಚಿವರು (ಆಡಳಿತ) ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ
14. ಕುಲಸಚಿವರು (ಮೌಲ್ಯಮಾಪನ), ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ
15. ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ.
16. ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
17. ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ಕರ್ನಾಟಕ ಸರ್ಕಾರ.
18. ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
19. ಪ್ರಾಂಶುಪಾಲರು, ಸರ್ಕಾರಿ/ ಅನುದಾನಿತ/ ಖಾಸಗಿ/ ಪ್ರಥಮ ದರ್ಜೆ ಕಾಲೇಜುಗಳು ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ
20. ವಿಶೇಷಾಧಿಕಾರಿ/ಸಮನ್ವಯಾಧಿಕಾರಿ, ಇ-ಆಡಳಿತ ಶಾಖೆ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
21. ಶಾಖಾ ರಕ್ಷಾ ಕಡತ

## ಅನುಬಂಧ-1

## ರಾಷ್ಟ್ರೀಯ ಶಿಕ್ಷಣ ನೀತಿ-2020 ಅನುಷ್ಠಾನದ ಮಾರ್ಗಸೂಚಿಗಳು

1. ಪ್ರಸಕ್ತ ವರ್ಷಕ್ಕೆ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಬಿ.ಎ. ಅಥವಾ ಬಿ.ಎಸ್‌ಸಿ. ಪದವಿ ಅಧ್ಯಯನಕ್ಕೆ ಆಯಾಯ ಕಾಲೇಜುಗಳಲ್ಲಿ ಲಭ್ಯವಿರುವ ಎರಡು ವಿಷಯಗಳನ್ನು (Discipline Core) ಆಯ್ಕೆ ಮಾಡಿಕೊಳ್ಳಬೇಕು. ನಂತರ ಮೂರನೇ ವರ್ಷದ ಪ್ರಾರಂಭದಲ್ಲಿ ಒಂದು ವಿಷಯವನ್ನು ಮೇಜರ್ ಆಗಿಯೂ, ಇನ್ನೊಂದು ವಿಷಯವನ್ನು ಮೈನರ್ ವಿಷಯವನ್ನಾಗಿಯೂ ಅಥವಾ ಎರಡೂ ವಿಷಯಗಳನ್ನು ಮೇಜರ್ ಆಗಿ ಆಯ್ಕೆ ಮಾಡಿಕೊಂಡು ಅಧ್ಯಯನ ಮಾಡಬಹುದು.

2. ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಳ್ಳುವ ಎರಡು ವಿಷಯಗಳ (Discipline Core) ಜೊತೆಗೆ, ಕನ್ನಡ ಮತ್ತು ಇನ್ನೊಂದು ಭಾಷಾ ವಿಷಯಗಳನ್ನು ಮತ್ತು ಪ್ರೋಗ್ರಾಮ್ ವಿನ್ಯಾಸಕ್ಕೆ (Curriculum Structure) ಅನುಗುಣವಾಗಿ Open Electives ಮತ್ತು Discipline Electives ಗಳನ್ನು ಆಯ್ಕೆ ಮಾಡಿಕೊಳ್ಳಬೇಕು. ಪಿ.ಯು.ಸಿ. ಅಥವಾ 10+2 ಹಂತದಲ್ಲಿ ಕನ್ನಡ ಕಲಿಯದವರಿಗೆ ಅಥವಾ ಕನ್ನಡ ಮಾತೃ ಭಾಷೆಯಲ್ಲದವರಿಗೆ ಬೇರೆ ಕನ್ನಡ ಪಠ್ಯಕ್ರಮವನ್ನು ರೂಪಿಸಿ ಬೋಧಿಸತಕ್ಕದ್ದು.

3. ವಿಷಯಾಧಾರಿತ ಸ್ನಾತಕ ಪದವಿ ಅಧ್ಯಯನಗಳಿಗೆ (B.Com, BCA, BBA, BVA, BPA, etc.) ಸಂಬಂಧಪಟ್ಟ ಹಾಗೆ ವಿಷಯಗಳನ್ನು (Discipline Core) ಆಯ್ಕೆ ಮಾಡಿಕೊಳ್ಳುವ ಅವಶ್ಯಕತೆಯಿರುವುದಿಲ್ಲ, ಅವರು ಕೇವಲ ಕನ್ನಡ ಹಾಗೂ ಮತ್ತೊಂದು ಭಾಷೆಗಳು ಮತ್ತು ಪ್ರೋಗ್ರಾಮ್ ವಿನ್ಯಾಸಕ್ಕೆ (Curriculum Structure) ಅನುಗುಣವಾಗಿ Open Electives ಮತ್ತು Discipline Electives ಗಳನ್ನು ಆಯ್ಕೆ ಮಾಡಿಕೊಳ್ಳಬೇಕು.

4. ವಿದ್ಯಾರ್ಥಿಯು ಪ್ರಥಮ ವರ್ಷದಲ್ಲಿ (National Skills Qualifications Framework Level 5) ನಿಗಧಿತ ಪಠ್ಯಕ್ರಮವನ್ನು ಅಧ್ಯಯನ ಮಾಡಿ, ಅವಶ್ಯಕ credit ಗಳನ್ನು ಗಳಿಸಿ ಕಾರಣಾಂತರಗಳಿಂದ ಅಧ್ಯಯನದಿಂದ ನಿರ್ಗಮಿಸಿದರೆ ಪ್ರಮಾಣ ಪತ್ರವನ್ನು(Certificate) ನೀಡಬೇಕು.

5. ವಿದ್ಯಾರ್ಥಿಯು ಎರಡನೇ ವರ್ಷದ ಅಧ್ಯಯನವನ್ನು ಮುಂದುವರೆಸಿ (National Skills Qualifications Framework Level 6) ನಿಗಧಿತ ಪಠ್ಯಕ್ರಮವನ್ನು ಅಧ್ಯಯನ ಮಾಡಿ ಅವಶ್ಯಕ credit ಗಳನ್ನು ಗಳಿಸಿ ಕಾರಣಾಂತರಗಳಿಂದ ಅಧ್ಯಯನದಿಂದ ನಿರ್ಗಮಿಸಿದರೆ ಡಿಪ್ಲೋಮಾ (Diploma) ನೀಡಬೇಕು.

6. ವಿದ್ಯಾರ್ಥಿಯು ಮೂರನೇ ವರ್ಷದ ಅಧ್ಯಯನವನ್ನು ಮುಂದುವರೆಸಿ (National Skills Qualifications Framework Level 7) ನಿಗಧಿತ ಪಠ್ಯಕ್ರಮವನ್ನು ಅಧ್ಯಯನ ಮಾಡಿ ಅವಶ್ಯಕ credit ಗಳನ್ನು ಗಳಿಸಿದರೆ ಸ್ನಾತಕ ಪದವಿಯನ್ನು (Bachelor Degree) ನೀಡುವುದು.

7. ವಿದ್ಯಾರ್ಥಿಗಳು ತಾವು ಅಧ್ಯಯನ ಮಾಡುತ್ತಿರುವ ಮಹಾವಿದ್ಯಾಲಯದಲ್ಲಿ ನಾಲ್ಕನೇ ವರ್ಷದ ಅಧ್ಯಯನ ಲಭ್ಯವಿದ್ದಲ್ಲಿ (National Skills Qualifications Framework Level 8) ಅವರು ಆಯ್ಕೆ ಮಾಡಿದ ಐಚ್ಛಿಕ ವಿಷಯಗಳ ಅಧ್ಯಯನವನ್ನು ಮುಂದುವರೆಸಿ ಅವಶ್ಯಕ credit ಗಳನ್ನು ಗಳಿಸಿ ಅಧ್ಯಯನವನ್ನು ಪೂರ್ಣಗೊಳಿಸಿದರೆ ಸ್ನಾತಕ ಹಾನರ್ಸ್ ಪದವಿ (Honours Degree) ಪಡೆಯಬಹುದು. ನಾಲ್ಕನೇ ವರ್ಷದಲ್ಲಿ ಸಂಶೋಧನೆ ಕೆಲಸವು (Research Project) ಅಧ್ಯಯನದ ಭಾಗವಾದರೆ, ಅಂತಹ ಸ್ನಾತಕ ಹಾನರ್ಸ್ ಪದವೀಧರರು ನೇರವಾಗಿ ಡಾಕ್ಟರೇಟ್ (Ph.D) ಪದವಿ ಅಧ್ಯಯನಕ್ಕೆ ಸೇರಲು ಅರ್ಹರಾಗುತ್ತಾರೆ.

8. ಒಂದು ವೇಳೆ ವಿದ್ಯಾರ್ಥಿಯು ಅಧ್ಯಯನ ಮಾಡುತ್ತಿರುವ ಮಹಾವಿದ್ಯಾಲಯದಲ್ಲಿ ಸ್ನಾತಕ ಹಾನರ್ಸ್ ಪದವಿ ತರಗತಿಗಳು ಲಭ್ಯವಿಲ್ಲದಿದ್ದರೆ, ವಿದ್ಯಾರ್ಥಿಯು ನಾಲ್ಕನೇ ವರ್ಷದ ಸ್ನಾತಕ ಹಾನರ್ಸ್ ಪದವಿಗೆ ಬೇರೊಂದು ಮಹಾವಿದ್ಯಾಲಯವನ್ನು ಸೇರಬಹುದು.

9. ಮಹಾವಿದ್ಯಾಲಯಗಳು ನಾಲ್ಕನೇ ವರ್ಷದ ಸ್ನಾತಕ ಹಾನರ್ಸ್ ಪದವಿ ತರಗತಿಗಳನ್ನು ನಡೆಸಲೇಬೇಕೆಂಬ ಕಡ್ಡಾಯವಿಲ್ಲ.

10. ವಿದ್ಯಾರ್ಥಿಯು ಅಧ್ಯಯನದ ಯಾವುದೇ ಹಂತದಲ್ಲಿ ಕಾರಣಾಂತರಗಳಿಂದ ಅಧ್ಯಯನವನ್ನು ನಿಲ್ಲಿಸಿದ್ದಲ್ಲಿ, ನಂತರ ಅದೇ ಹಂತದಿಂದ ಅಧ್ಯಯನವನ್ನು ಮುಂದುವರೆಸಬಹುದು.

11. ವಿದ್ಯಾರ್ಥಿಯು ಯಾವುದೇ ಹಂತದಲ್ಲಿ ಗಳಿಸಬೇಕಾದ credit ಗಳ ಗರಿಷ್ಠ ಶೇಕಡಾ 40% ರಷ್ಟು credit ಗಳನ್ನು, ಅಧಿಕೃತ ಆನ್‌ಲೈನ್ ಕೋರ್ಸ್‌ಗಳ ಮುಖಾಂತರ ಗಳಿಸಿ ತನ್ನ ಶೈಕ್ಷಣಿಕ ಖಾತೆಯಲ್ಲಿ ಜಮಾ ಮಾಡಿಕೊಳ್ಳಬಹುದು.

12. ವಿದ್ಯಾರ್ಥಿಯು ಯಾವ ವಿಶ್ವವಿದ್ಯಾಲಯದಿಂದ ಪದವಿಗಳನ್ನು ಪಡೆಯಲು ಬಯಸುತ್ತಾನೆಯೋ, ಆ ವಿಶ್ವವಿದ್ಯಾಲಯದಿಂದ ಕನಿಷ್ಠ ಶೇಕಡ 50% credit ಗಳನ್ನು ಪಡೆದುಕೊಳ್ಳಬೇಕಾಗಿರುತ್ತದೆ.

13. ವಿದ್ಯಾರ್ಥಿಯು Discipline Core, Open Electives ಮತ್ತು Discipline Electives ವಿಷಯಗಳನ್ನು ಆಯ್ಕೆ ಮಾಡಿಕೊಳ್ಳುವಾಗ ಆ ವಿಷಯದ ಅಧ್ಯಯನಕ್ಕೆ ನಿಗದಿತ ಪೂರಕ ಅವಶ್ಯಕತೆಗಳನ್ನು (Pre-Requisite) ಪೂರೈಸಬೇಕಾಗುತ್ತದೆ, ಉದಾಹರಣೆಗೆ: Physics ಅಥವಾ Mathematics ವಿಷಯಗಳನ್ನು ಆಯ್ಕೆ ಮಾಡಿಕೊಳ್ಳಬೇಕಾದರೆ, PUC ಅಥವಾ (10+2) ನಲ್ಲಿ ಆ ವಿಷಯಗಳನ್ನು ಅಧ್ಯಯನ ಮಾಡಿರಬೇಕು. ಒಂದು ವೇಳೆ PUC ಅಥವಾ (10+2) ನಲ್ಲಿ ಆ ವಿಷಯವನ್ನು ಅಧ್ಯಯನ ಮಾಡಿರದಿದ್ದರೆ, ಆ ವಿಷಯದಲ್ಲಿ ಅಧಿಕೃತ Prerequisite Course ಗಳನ್ನು ಅಧ್ಯಯನ ಮಾಡಿರಬೇಕಾಗುತ್ತದೆ.

14. ವಿದ್ಯಾರ್ಥಿಗಳು ಸಮ ಸಂಖ್ಯೆಯ ಸೆಮಿಸ್ಟರ್ ನಂತರ ನಿರ್ಗಮಿಸಬಹುದು, ಆಗ ಮಾತ್ರ ನಿಗದಿತ Certificate, Diploma, ಸ್ನಾತಕ ಪದವಿ ಅಥವಾ ಸ್ನಾತಕ ಹಾನರ್ಸ್ ಪದವಿ ನೀಡಲು ಸಾಧ್ಯವಾಗುತ್ತದೆ. ಪ್ರತಿಯೊಂದು ಹಂತಕ್ಕೆ ಎರಡು ಸೆಮಿಸ್ಟರ್ ಗಳಲ್ಲಿ ನಿಗದಿಪಡಿಸಿದ ಅಧ್ಯಯನವನ್ನು ಪೂರ್ಣಗೊಳಿಸಬೇಕಾಗುತ್ತದೆ.

15. ಬೆಸ ಸಂಖ್ಯೆಯ ಸೆಮಿಸ್ಟರ್‌ಗಳಿಗೆ ಮಾತ್ರ ಪುನರ್‌ಪ್ರವೇಶ ಪಡೆಯಬಹುದು.

16. ಮೂರು ವರ್ಷದ ಸ್ನಾತಕ ಪದವಿ ಅಥವಾ ನಾಲ್ಕು ವರ್ಷದ ಸ್ನಾತಕ ಹಾನರ್ಸ್ ಪದವಿ ಜೊತೆಗೆ ಅರ್ಹ ಮಹಾವಿದ್ಯಾಲಯಗಳು ಐದು ವರ್ಷದ ಏಕೀಕೃತ ಸ್ನಾತ್ತಕೋತ್ತರ ಪದವಿಗಳನ್ನು ನಡೆಸಬಹುದು. ಆ ಸಂದರ್ಭಗಳಲ್ಲಿ ಮೂರು ಮತ್ತು ನಾಲ್ಕನೇ ವರ್ಷದ ಅಧ್ಯಯನ ಮುಗಿಸಿ ಕಾರಣಾಂತರಗಳಿಂದ ನಿರ್ಗಮಿಸಿದರೆ ಅನುಕ್ರಮವಾಗಿ ಸ್ನಾತಕ ಮತ್ತು ಸ್ನಾತಕ ಹಾನರ್ಸ್ ಪದವಿಗಳನ್ನು ನೀಡಬಹುದು.

17. ಸ್ನಾತಕೋತ್ತರ ಪದವಿಗಳು ಒಂದು ಅಥವಾ ಎರಡು ವರ್ಷಗಳ ಅವಧಿಯದ್ದಾಗಿರುತ್ತವೆ. ಒಂದು ವರ್ಷದ ಸ್ನಾತಕೋತ್ತರ ಪದವಿಗೆ ಸೇರಲು ನಾಲ್ಕು ವರ್ಷದ ಸ್ನಾತಕ ಹಾನರ್ಸ್ ಪದವಿ ಪಡೆದ ಪದವೀದರರು ಅರ್ಹರಾಗಿರುತ್ತಾರೆ, ಹಾಗೆಯೇ ಎರಡು ವರ್ಷದ ಸ್ನಾತಕೋತ್ತರ ಪದವಿಗೆ ಸೇರಲು ಮೂರು ವರ್ಷದ ಸ್ನಾತಕ ಪದವಿ ಪಡೆದವರು ಅರ್ಹರಾಗುತ್ತಾರೆ.

18. ಎರಡು ವರ್ಷದ ಸ್ನಾತಕೋತ್ತರ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು, ಮೊದಲನೇ ವರ್ಷದ ಆಯ್ದ ವಿಷಯಗಳಲ್ಲಿ ನಿಗದಿತ credit ಗಳನ್ನು ಗಳಿಸಿ ನಿರ್ಗಮಿಸಿದರೆ, ಸ್ನಾತಕೋತ್ತರ ಡಿಪ್ಲೋಮಾ (Post-Graduate Diploma) ನೀಡಬಹುದು.

Seetal M. Hiremath

**(ಶೀತಲ್ ಎಂ. ಹಿರೇಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ
(ವಿಶ್ವವಿದ್ಯಾಲಯ-1)
ಉನ್ನತ ಶಿಕ್ಷಣ ಇಲಾಖೆ